# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 989 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 27.12.2022 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಹೆಚ್ಚು ಸ್ಥಾಪನೆ ಮಾಡದೆ ಅಸ್ತಿತ್ವದಲ್ಲಿರುವ ಕೈಗಾರಿಕೆಗಳಿಗೆ ಉತ್ತೇಜನ ನೀಡಲು ಸರ್ಕಾರದಿಂದ ನೀಡಿರುವ ಅನುದಾನ ಎಷ್ಟು; | ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಹೆಚ್ಚು ಸ್ಥಾಪನೆ ಮಾಡದೆ ಅಸ್ತಿತ್ವದಲ್ಲಿರುವ ಕೈಗಾರಿಕೆಗಳಿಗೆ ಉತ್ತೇಜನ ನೀಡಲು ಸರ್ಕಾರದಿಂದ ಅನುದಾನ ನೀಡುವ ವ್ಯವಸ್ಥೆ ಇರುವುದಿಲ್ಲ.<br><br>ಆದರೆ ಹಾಲಿ ಅಸ್ತಿತ್ವದಲ್ಲಿರುವ ಕೈಗಾರಿಕೆಗಳು ವಿಸ್ತರಣೆಯನ್ನು ಮಾಡಿ ಹೆಚ್ಚುವರಿ ಬಂಡವಾಳವನ್ನು ಹೂಡಿ ಹೆಚ್ಚು ಉತ್ಪಾದನೆ ಮಾಡಿ, ಹೆಚ್ಚು ಉದ್ಯೋಗ ಕಲ್ಪಿಸಿದಲ್ಲಿ ಅಂತಹ ಹೆಚ್ಚುವರಿ ಬಂಡವಾಳ ಹೂಡಿಕೆಗೆ ಹೊಸ ಕೈಗಾರಿಕಾ ನೀತಿ 2020-25 ರನ್ವಯ ಈ ಕೆಳಗಿನ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ.<br><br>1. ಬಂಡವಾಳ ಹೂಡಿಕೆ ಸಹಾಯಧನ<br>2. ಮುದ್ರಾಂಕ ಶುಲ್ಕ ವಿನಾಯಿತಿ<br>3. ನೊಂದಣಿ ಶುಲ್ಕ ರಿಯಾಯಿತಿ<br>4. ವಿದ್ಯುತ್ ತೆರಿಗೆ ವಿನಾಯಿತಿ<br>5. ವಿದ್ಯುತ್ ಸಹಾಯಧನ<br>6. ಭೂಪರಿವರ್ತನಾ ಶುಲ್ಕ ಮರುಪಾವತಿ<br>7. ಇ.ಟಿ.ಪಿ ಸ್ಥಾಪನೆ ಸಹಾಯಧನ |
| (ಆ) | ಈ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಭೂಮಿ ಹಾಗೂ ಕಾರ್ಖಾನೆ ನಿರ್ಮಾಣ ಮಾಡಲು ಹೆಚ್ಚು ಅನುದಾನವನ್ನು ನೀಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ; | ಸಣ್ಣ ಕೈಗಾರಿಕೆ ಸ್ಥಾಪಿಸುವ ಉದ್ಯಮಶೀಲರಿಗೆ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ಕೈಗಾರಿಕಾ ಪ್ರದೇಶ ಮತ್ತು ವಸಾಹತುಗಳನ್ನು ಸ್ಥಾಪಿಸಿ ಅವುಗಳಲ್ಲಿ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಹಂಚಿಕೆ ಮಾಡಲಾಗುವುದು.<br><br>ಮುಂದುವರೆದು ಕೈಗಾರಿಕಾ ಪ್ರಾರಂಭಿಸುವ ಉದ್ಯಮಶೀಲರಿಗೆ ಹೊಸ ಕೈಗಾರಿಕಾ ನೀತಿ 2020-25 ರನ್ವಯ ಈ ಕೆಳಗಿನ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ.<br><br>1. ಬಂಡವಾಳ ಹೂಡಿಕೆ ಸಹಾಯಧನ<br>2. ಮುದ್ರಾಂಕ ಶುಲ್ಕ ವಿನಾಯಿತಿ<br>3. ನೊಂದಣಿ ಶುಲ್ಕ ರಿಯಾಯಿತಿ<br>4. ವಿದ್ಯುತ್ ತೆರಿಗೆ ವಿನಾಯಿತಿ<br>5. ವಿದ್ಯುತ್ ಸಹಾಯಧನ<br>6. ಭೂಪರಿವರ್ತನಾ ಶುಲ್ಕ ಮರುಪಾವತಿ<br>7. ಇ.ಟಿ.ಪಿ ಸ್ಥಾಪನೆ ಸಹಾಯಧನ |

| | | |
|---|---|---|
| (ಇ) | ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಹೆಚ್ಚಿನ ಪ್ರೋತ್ಸಾಹ ನೀಡಿದ್ದಲ್ಲಿ, ಈ ಕಾರ್ಖಾನೆಗಳಲ್ಲಿ ಹೆಚ್ಚು ಉದ್ಯೋಗಾವಕಾಶ ಸೃಷ್ಟಿಯಾಗಲಿದ್ದು, ಇದನ್ನು ಸರ್ಕಾರ ಮನಗಂಡಿದೆಯೇ? | ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಹೆಚ್ಚಿನ ಪ್ರೋತ್ಸಾಹ ನೀಡಿದ್ದಲ್ಲಿ, ಈ ಕಾರ್ಖಾನೆಗಳಲ್ಲಿ ಹೆಚ್ಚು ಉದ್ಯೋಗಾವಕಾಶ ಸೃಷ್ಟಿಯಾಗಲಿದ್ದು, ಇದನ್ನು ಸರ್ಕಾರ ಮನಗಂಡಿದ್ದು ಇದಕ್ಕಾಗಿಯೇ ಕರ್ನಾಟಕ ಸರ್ಕಾರವು ಹೊಸ ಕೈಗಾರಿಕಾ ನೀತಿ 2020-25 ಯನ್ನು 13.08.2020 ರಿಂದ ಜಾರಿಗೆ ತಂದಿರುತ್ತದೆ. |

ಸಿಐ 192 ಎಸ್ಎಸ್ಐ 2022

(ಎನ್.ನಾಗರಾಜು (ಎಂ.ಟಿ.ಬಿ))
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು